ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ನೇವಿ-1/ಅಉಆ/315/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:10-01-2023

**ಪ್ರಕಟಣೆ**

ವಿಷಯ: 2022-23ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಪ್ರಕಟಣೆ ದಿನಾಂಕ:03.01.2023.

* * * * * * *

ಉಲ್ಲೇಖಿತ ಪ್ರಕಟಣೆಯಲ್ಲಿ 2022-23ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆ ಮಾಡಿಕೊಳ್ಳುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ, ವೇಳಾಪಟ್ಟಿಯನ್ನು ಪ್ರಕಟಿಸಲಾಗಿತ್ತು. ಅದರಂತೆ ಅರ್ಜಿ ಸಲ್ಲಿಸಲು ನಿಗಧಿಪಡಿಸಲಾಗಿದ್ದ **ಕೊನೆಯ ದಿನಾಂಕವನ್ನು ದಿನಾಂಕ:12.01.2023 ರವರೆಗೆ ವಿಸ್ತರಿಸಲಾಗಿದೆ.**

ಮುಂದುವರೆದು, ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಹಲವಾರು ಅಭ್ಯರ್ಥಿಗಳು ಅರ್ಜಿಯಲ್ಲಿನ ವಿವರಗಳನ್ನು ತಿದ್ದುಪಡಿ (Edit) ಮಾಡಲು ಅವಕಾಶ ನೀಡುವಂತೆ ಕೋರಿರುತ್ತಾರೆ. ಅರ್ಜಿಯಲ್ಲಿನ ವಿವರಗಳನ್ನು ತಿದ್ದುಪಡಿ (Edit) ಮಾಡಲು ಪ್ರಸ್ತುತ ಅವಕಾಶವಿದ್ದು, ಅದರಂತೆ ತಿದ್ದುಪಡಿ ಮಾಡಿಕೊಳ್ಳುವಂತೆ ಹಾಗೂ ಕೊನೆಯ ದಿನಾಂಕದ ನಂತರ ಯಾವುದೇ ಕಾರಣಕ್ಕೂ ತಿದ್ದುಪಡಿ (Edit) ಮಾಡಲು ಅವಕಾಶ ನೀಡಲಾಗುವುದಿಲ್ಲ ಎಂಬುದನ್ನು ಈ ಮೂಲಕ ತಿಳಿಸಲಾಗಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

10/01/2023

**ಮುಖ್ಯ ಆಡಳಿತಾಧಿಕಾರಿಗಳು**
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ,**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4. ಕಛೇರಿ ಪ್ರತಿ.